ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

11

ಇಲಾಖೆ / ವಿಷಯ : DEPARTMENT / SUBJECT: ರಾಜ್ಯ ಸಭಾ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE : 23/7/20


# ಖರ್ಗೆ, ಗಸ್ತಿ, ಕಡಾಡಿ ಪ್ರಮಾಣ

## ರಾಜ್ಯದ ಮೂವರು ಸದಸ್ಯರಿಂದ ಕನ್ನಡದಲ್ಲೇ ಶಪಥ | ದೇವೇಗೌಡ ಗೈರು



**ರಾಜ್ಯಸಭಾ ಸದಸ್ಯನಾಗಿ ಆಯ್ಕೆ ಮಾಡಿದ ಪಕ್ಷಕ್ಕೆ, ಶಾಸಕರಿಗೆ, ಹೈಕಮಾಂಡ್‌ಗೆ ನನ್ನ ಧನ್ಯವಾದಗಳು. ರಾಜ್ಯಸಭೆಯಲ್ಲಿ ಚರ್ಚೆ ಮಾಡಲು ಬಹಳಷ್ಟು ವಿಷಯಗಳಿವೆ. ಗಡಿ, ಕೊರೊನಾ ಹೀಗೆ ಹಲವು ವಿಚಾರಗಳ ಕುರಿತು ಚರ್ಚೆ ಆಗಬೇಕಿವೆ.**

**• ಮಲ್ಲಿಕಾರ್ಜುನ ಖರ್ಗೆ**
ನೂತನ ರಾಜ್ಯಸಭಾ ಸದಸ್ಯ



**ಸಾಮಾನ್ಯ ಕಾರ್ಯಕರ್ತನೊಬ್ಬನಿಗೆ ಈ ಅವಕಾಶ ಮಾಡಿಕೊಟ್ಟ ಪಕ್ಷಕ್ಕೆ, ಪ್ರಧಾನಿ ಮೋದಿ ಹಾಗೂ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ ಧನ್ಯವಾದಗಳು. ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ನಾನು ಶ್ರಮಿಸಲಿದ್ದೇನೆ.**

**• ಅಶೋಕ್ ಗಸ್ತಿ**
ನೂತನ ರಾಜ್ಯಸಭಾ ಸದಸ್ಯ



**ನಾನು ರೈತ ಕುಟುಂಬದಿಂದ ಬಂದಿದ್ದೇನೆ. ರೈತರ ಆದಾಯ ದ್ವಿಗುಣ ಗೊಳಿಸುವ ಬಗ್ಗೆ ನನ್ನ ಆಸಕ್ತಿ ಇದೆ. ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ನಡುವೆ ಸೇತುವೆಯಾಗಿ ಕೆಲಸ ಮಾಡುವ ಭರವಸೆಯನ್ನು ಈ ಸಂದರ್ಭದಲ್ಲಿ ನೀಡುತ್ತೇನೆ.**

**• ಈರಣ್ಣ ಕಡಾಡಿ**
ನೂತನ ರಾಜ್ಯಸಭಾ ಸದಸ್ಯ

ನವದೆಹಲಿ: ರಾಜ್ಯಸಭೆಗೆ ಆಯ್ಕೆ ಆದ ರಾಜ್ಯದ ನಾಲ್ವರು ರಾಜ್ಯಸಭಾ ಸದಸ್ಯರ ಪೈಕಿ ಕಾಂಗ್ರೆಸ್ ಮುಖಂಡ ಮಲ್ಲಿಕಾರ್ಜುನ ಖರ್ಗೆ, ಬಿಜೆಪಿ ಸದಸ್ಯರಾದ ಈರಣ್ಣ ಕಡಾಡಿ, ಅಶೋಕ್ ಗಸ್ತಿ ರಾಜ್ಯಸಭಾ ಸದಸ್ಯರಾಗಿ ಬುಧವಾರ ಪ್ರಮಾಣವಚನ ಸ್ವೀಕರಿಸಿದರು. ಈ ಮೂವರು ಕನ್ನಡದಲ್ಲೇ ಪ್ರಮಾಣವಚನ ಸ್ವೀಕರಿಸಿದ್ದು ವಿಶೇಷವಾಗಿತ್ತು. ಅಶೋಕ್ ಗಸ್ತಿ ಮತ್ತು ಈರಣ್ಣ ಕಡಾಡಿ ದೇವರ ಹೆಸರಿನಲ್ಲಿ ಪ್ರಮಾಣ ಸ್ವೀಕರಿಸಿದರು. ರಾಜ್ಯಸಭಾ ಸದಸ್ಯರಾಗಿ ಆಯ್ಕೆ ಆಗಿರುವ ಮಾಜಿ ಪ್ರಧಾನಿ ದೇವೇಗೌಡ ಅವರು ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ಹಾಜರಾಗಿರಲಿಲ್ಲ.

ರಾಜ್ಯಸಭೆಗೆ ಆಯ್ಕೆ ಆದ 61 ನೂತನ ಸದಸ್ಯರ ಪೈಕಿ ಬುಧವಾರ 45 ಸದಸ್ಯರಿಗೆ ರಾಜ್ಯಸಭಾ ಸಭಾಪತಿ ವೆಂಕಯ್ಯನಾಯ್ಡು ಗೌಪ್ಯತಾ ವಿಧಿ ಬೋಧಿಸಿದರು. ಕೊರೋನಾ ವೈರಸ್ ಹಿನ್ನೆಲೆಯಲ್ಲಿ ಸರಳವಾಗಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಮಧ್ಯ ಪ್ರದೇಶದಲ್ಲಿ ಕಾಂಗ್ರೆಸ್ ತೊರೆದು ಬಿಜೆಪಿಗೆ ಸೇರ್ಪಡೆ ಆಗಿರುವ ಜ್ಯೋತಿರಾದಿತ್ಯ ಸಿಂಧಿಯಾ, ಎನ್‌ಸಿಪಿ ಮುಖಂಡ ಶರದ್ ಪವಾರ್, ಕಾಂಗ್ರೆಸ್ ಮುಖಂಡ ದಿಗ್ವಿಜಯ್ ಸಿಂಗ್, ಕೇಂದ್ರ ಸಚಿವ ರಾಮದಾಸ್ ಅಟಾವಳೆ ಪ್ರಮಾಣ ವಚನ ಸ್ವೀಕರಿಸಿದ ಇತರ ಪ್ರಮುಖ ಮುಖಂಡರಾಗಿದ್ದಾರೆ.

ಸದಸ್ಯರ ಪೈಕಿ ಪೈಕಿ 36 ಮಂದಿ ಮೊದಲ ಬಾರಿಗೆ ರಾಜ್ಯಸಭೆಗೆ ಆಯ್ಕೆ ಆದವರಾಗಿದ್ದಾರೆ. ಕರ್ನಾಟಕದಿಂದ ಮಲ್ಲಿಕಾರ್ಜುನ ಖರ್ಗೆ ಮೊದಲ ಬಾರಿಗೆ ರಾಜ್ಯಸಭೆಗೆ ಆಯ್ಕೆ ಆಗಿದ್ದಾರೆ. ಅದೇ ರೀತಿ ಬಿಜೆಪಿಯ ಈರಣ್ಣ ಕಡಾಡಿ ಮತ್ತು ಅಶೋಕ್ ಗಸ್ತಿ ರಾಜ್ಯಸಭೆಯನ್ನು ಮೊದಲ ಬಾರಿ ಪ್ರವೇಶಿಸಿದ್ದಾರೆ.